ಓಎಸ್. 93/2020
ಪಿಡಬ್ಲ್ಯೂ-1

ದಿನಾಂಕ 14.07.2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಮಾಡಿಸಲಾಯಿತು.

ಮುಖ್ಯ ವಿಚಾರಣೆಃ- ವಾದಿ ಪರ ವಕೀಲರಿಂದಃ-

19. ನನ್ನ ಮುಖ್ಯ ವಿಚಾರಣೆಯ ಪ್ರಮಾಣಪತ್ರವನ್ನು ಈ ದಿನ ನ್ಯಾಯಾಲಯದಲ್ಲಿ ಸಲ್ಲಿಸಿದ್ದು, ಅದರಲ್ಲಿರುವ ಅಂಶಗಳು ಸತ್ಯವಾಗಿವೆ.

ವಾದಿಯು ಸಾಕ್ಷಿಗೆ ನೀಡಿರುವ ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1, ಒಎಸ್.ನಂ.20/1998 ರಲ್ಲಿನ ವಾದಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2, ಸದರಿ ದಾವೆಯಲ್ಲಿ ವಾದಿಯು ಕೌಂಟರ್ ಕ್ಲೈಮ್ ಗೆ ಸಲ್ಲಿಸಿರುವ ಜವಾಬಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3, ಸದರಿ ದಾವೆಯಲ್ಲಿನ ತೀರ್ಪಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4, ಸರ್ವೆ ನಂ.113/3 ರ ಪಹಣಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5, ದಿನಾಂಕ 09.10.2020 ರಂದು ಹುದಿಕೇರಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗೆ ನೀಡಿರುವ ನೋಟೀಸನ್ನು ನಿಪಿ-6, ದಿನಾಂಕ 05.10.2020 ರಂದು ಶ್ರೀಮಂಗಲ ಪೋಲೀಸ್ ಠಾಣೆಯ ಆರಕ್ಷಕ ಉಪನಿರೀಕ್ಷಕರು ನೀಡಿರುವ ಸ್ವೀಕೃತಿಯನ್ನು ನಿಪಿ-7, ದಿನಾಂಕ 05.10.2020 ರಂದು ನೀಡಿರುವ ಹಿಂಬರಹವನ್ನು ನಿಪಿ-8, ಅಂಚೆ ಸ್ವೀಕೃತಿಗಳನ್ನು ನಿಪಿ-9 ರಿಂದ 12, ಎಫ್.ಡಿ.ಪಿ.ನಂ.6/2014 ರಲ್ಲಿನ ಅರ್ಜಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-13, ಎಫ್.ಡಿ.ಪಿ.ನಂ.6/2014 ರಲ್ಲಿ ನ್ಯಾಯಾಲಯದ ಆಯುಕ್ತರು ಸಲ್ಲಿಸಿರುವ ವರದಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-14, ಎಫ್.ಡಿ.ಪಿ.ನಂ.6/2014 ರಲ್ಲಿ ಸಲ್ಲಿಸಿರುವ ಮಹಜರಿನ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-15 ಮತ್ತು 16, ನಕ್ಷೆಯನ್ನು ನಿಪಿ-17, ಎಫ್.ಡಿ.ಪಿ.ನಂ.6/2014 ರಲ್ಲಿ 2 ನೇ ಪ್ರತಿವಾದಿ ಹಾಗೂ 2 ರಿಂದ 9 ನೇ ಅರ್ಜಿದಾರರು ಸಲ್ಲಿಸಿರುವ ತಕರಾರಿನ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-18 ಮತ್ತು 19 ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಈ ಹಂತದಲ್ಲಿ ಪಾಟೀ ಸವಾಲಿಗೆ ವೇಳೆ ಕೇಳಲಾಗಿ ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೆ ಕೇ ಸ ಇ ಎ ಒ.
ಸಹಿಃ
ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರಧನ್ಯಾದಂಃ ವಿರಾಜಪೇಟೆ.

(ಸಾಕ್ಷಿದಾರರ ಸಹಿ)

ಪಿಡಬ್ಲ್ಯೂ-1